ದಕ್ಷಿಣ ಕನ್ನಡ ಜಿಲ್ಲೆಯ ವಾಣಿಜ್ಯ ತೆರಿಗೆ ಇಲಾಖೆಯಿಂದ ದಾಳಿಗೊಳಗಾದ ವ್ಯಾಪಾರಿ ಸಂಸ್ಥೆಗಳು

3343 - ಶ್ರೀ ಎನ್.ಯೋಗೀಶ್ ಭಟ್ (ಮಂಗಳೂರು) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಕಳೆದ ಮೂರು ವರ್ಷಗಳಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವಾಣಿಜ್ಯ ಇಲಾಖೆಯ ದಾಳಿಗೆ ಒಳಗಾದ ವ್ಯಾಪಾರಿ ಸಂಸ್ಥೆಗಳ ಸಂಖ್ಯೆ ಎಷ್ಟು?
2. ಆ ಪೈಕಿ ಜಿಲ್ಲೆಯ ಅಧಿಕಾರಿಗಳಿಂದ ದಾಳಿಗೆ ಒಳಗಾದ ವ್ಯಾಪಾರಿ ಸಂಸ್ಥೆಗಳ ಸಂಖ್ಯೆ ಎಷ್ಟು?
3. ಗುಪ್ತಚಾರ ವಾಣಿಜ್ಯ ಅಧಿಕಾರಿಗಳಿಂದ ದಾಳಿಗೆ ಒಳಗಾದ ವ್ಯಾಪಾರಿ ಸಂಸ್ಥೆಗಳ ಸಂಖ್ಯೆ ಎಷ್ಟು?
4. ರಾಜ್ಯಮಟ್ಟದ ಅಧಿಕಾರಿಗಳಿಂದ ದಾಳಿಗೆ ಒಳಗಾದ ವ್ಯಾಪಾರಿ ಸಂಸ್ಥೆಗಳ ಸಂಖ್ಯೆ ಎಷ್ಟು?
5. ಈ ಪೈಕಿ ಹಾಕಿರುವ ಒಟ್ಟು ಕೇಸುಗಳ ಸಂಖ್ಯೆ ಎಷ್ಟು ಮತ್ತು ವಿಧಿಸಿರುವ ಒಟ್ಟು ದಂಡ ಎಷ್ಟು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) :

	1997-98	*1998-99*	*1999-2000*
1)	2290	2599	2521
2)	2290	2598	2521
3)	567	711	695
4)	-	1	-
5) (ಅ)	-	-	4
(ಆ)	149.90 ಲಕ್ಷ	156.50 ಲಕ್ಷ	1329.71ಲಕ್ಷ

ಅಧ್ಯಕ್ಷರು : ಮಂಡಿಸಲಾಯಿತು. ಈಗ ವರದಿಗಳನ್ನೊಪ್ಪಿಸುವುದು.

ವರದಿ ಒಪ್ಪಿಸುವುದು

ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ) : ಮಾನ್ಯ ಅಧ್ಯಕ್ಷರೇ, ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಯ ಅಧ್ಯಕ್ಷನಾದ ನಾನು ನೀರಾವರಿ ಇಲಾಖೆಗೆ ಸಂಬಂಧಿಸಿದ ಸಮಿತಿಯ ಎರಡನೇ ವರದಿಯನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.